## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ಎನ್.ಗದಗ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ಇಲಾಖಾ ವಿಚಾರಣಾಧಿಕಾರಿಗಳು ಇವರಿಗೆ ಸಂಚಿತ ಸಂಭಾವನೆ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-** 1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 6 ಸೇಇವಿ 2010, ದಿ:28.04.2011
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 97 ವಿಸೇಬಿ 2013, ದಿ:03.06.2015
3. ವಿಚಾರಣಾಧಿಕಾರಿಯವರ ವರದಿ ದಿನಾಂಕ: 13.10.2016

****

**ಪ್ರಸ್ತಾವನೆ:**

ಉತ್ತರ ಕನ್ನಡ ಜಿಲ್ಲಾ ಪಂಚಾಯತ್‌ನ ಮುಂಡಗೋಡ ತಾಲ್ಲೂಕು ಪಂಚಾಯತ್‌ನಲ್ಲಿ ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಎಂ.ಎಸ್.ಮೇಟಿ, ಇವರು ದಿನಾಂಕ: 18.06.2013 ರಂದು ಬೆಳಗಿನ ಜಾವ 1-15 ನಿಮಿಷಕ್ಕೆ ಹಿಂದುಳಿದ ವರ್ಗಗಳ ಮಾಳಗಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಪಾನಮತ್ತರಾಗಿ ಹೋಗಿ, ವಿದ್ಯಾರ್ಥಿ ನಿಲಯದ ಬಾಗಿಲು ತೆರೆಯುವಂತೆ ವಿದ್ಯಾರ್ಥಿನಿಯರುಗಳಿಗೆ ಹಾಗೂ ಸಿಬ್ಬಂದಿಗಳಿಗೆ ಬೆದರಿಕೆ ಹಾಕಿದ್ದ ಹಾಗೂ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದ ಆರೋಪಕ್ಕೆ ಸಂಬಂಧಿಸಿದಂತೆ, ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ ಇಲಾಖಾ ವಿಚಾರಣೆಯನ್ನು ಜರುಗಿಸಲು, ದೋಷಾರೋಪಣ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟಿಸನ್ನು ದಿನಾಂಕ: 11.03.2014 ರಂದು ಜಾರಿ ಮಾಡಲಾಗಿತ್ತು. ಇದಕ್ಕೆ ಅಧಿಕಾರಿಯ ಸಲ್ಲಿಸಿದ್ದ ರಕ್ಷಣಾ ಹೇಳಿಕೆಯು ಅವರ ವಿರುದ್ಧದ ಆರೋಪಗಳನ್ನು ಕೈಬಿಡಲು ಸ-ಕಾರಣ/ಸಮಂಜಸ/ತೃಪ್ತಿಕರವಾಗಿಲ್ಲದೆ ಇರುವುದರಿಂದ, ಅಧಿಕಾರಿ ವಿರುದ್ಧದ ಆರೋಪಗಳ ಸತ್ಯಾಸತ್ಯೆಯನ್ನು ತಿಳಿಯಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ಇಲಾಖಾ ವಿಚಾರಣೆಯನ್ನು ನಡೆಸಲು, ಅದೇ ನಿಯಮಾವಳಿಗಳ ನಿಯಮ-11 (2)ರ ಪ್ರಕಾರ ಮೇಲೆ (2) ರಲ್ಲಿ ಓದಲಾದ ದಿನಾಂಕ: 03.06.2015ರ ಸರ್ಕಾರಿ ಆದೇಶದಲ್ಲಿ, ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿದ್ದ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಎಂ.ಎನ್.ಗದಗ, ಇವರು ಮೇಲೆ (3) ರಲ್ಲಿ ಓದಲಾದ ಪತ್ರ ದಿನಾಂಕ: 13.10.2016ರ ರೊಂದಿಗೆ ಶಿಸ್ತುಪ್ರಾಧಿಕಾರಿಯಾದ ಸರ್ಕಾರಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿ, ರೂ. 15,000/-ಗಳ ಸಂಭಾವನೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು, ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದರಿಂದ, ವಿಚಾರಣಾಧಿಕಾರಿಯವರಿಗೆ ಅವರ ನೇಮಕಾತಿ ಸಂಧರ್ಭದಲ್ಲಿ ಚಾಲ್ತಿಯಲ್ಲಿದ್ದಂತೆ ಸಂಚಿತ ಸಂಭಾವನೆ ಹಾಗೂ ವಾಹನ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 97 ವಿಸೇಬಿ 2013 ಬೆಂಗಳೂರು ದಿನಾಂಕ: 23-12-2016**

ಶ್ರೀ ಎಂ.ಎನ್.ಗದಗ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿ, ಇವರಿಗೆ ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 6 ಸೇಇವಿ 2010, ದಿನಾಂಕ: 28.04.2011ರ ಪ್ರಕಾರ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ.15,000/- (ರೂ. ಹದಿನೈದು ಸಾವಿರಗಳು ಮಾತ್ರ) ಗಳ ಸಂಭಾವನೆ ಮಂಜೂರು ಮಾಡಿದೆ.

ಶ್ರೀ ಎಂ.ಎನ್.ಗದಗ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿಗಳು, ಇವರಿಗೆ ಸದರಿ ಮೊತ್ತವನ್ನು ಪಾವತಿಸುವ ಕುರಿತು ಕೂಡಲೇ ಅಗತ್ಯ ಕ್ರಮ ವಹಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

23/12/2016
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ &ಸಿ)
ಗ್ರಾಮೀಣಾಭಿವೃದ್ದಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು(ಜಿ&ಎಸ್ಎಸ್ಎ)/(ಇ&ಆರ್ಎಸ್ಎ)/(ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ.
3) ಶ್ರೀ ಎಂ.ಎನ್.ಗದಗ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಇಲಾಖಾ ವಿಚಾರಣಾಧಿಕಾರಿಗಳು, ಮುಖ್ಯ ಇಂಜಿನೀಯರ್‌ರವರ ಕಚೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಮಲಪ್ರಭಾ ಯೋಜನಾ ವಲಯ ಧಾರವಾಡ.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ದಿ ಮತ್ತು ಪಂ. ರಾಜ್ ಇಲಾಖೆ.
5) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅಪಂ.ರಾಜ್ ಇಲಾಖೆ
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.